# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ, ಇಲ್ಲಿನ ಕನ್ನಡ ಮಾಧ್ಯಮ ಶಾಲೆಯನ್ನು ಆಂಗ್ಲ ಮಾಧ್ಯಮಕ್ಕೆ ಪರಿವರ್ತಿಸಿ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ:ಸಕಾಇ 153 ಮೊದೇಶಾ 2009, ದಿನಾಂಕ:13-01-2010.
2. ಸರ್ಕಾರಿ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 346 ಎಂಡಿಎಸ್ 2014, ದಿನಾಂಕ:24-07-2014.
3. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ರವರ ಏಕಕಡತದ ಪ್ರಸ್ತಾವನೆಸಂಖ್ಯೆ: ಅಸಂನಿ/ಮು.ವ.ಶಾ/ಸಿಆರ್-04/2016-17, ದಿನಾಂಕ: 04-04-2016.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ(1)ರಲ್ಲಿನ ಸರ್ಕಾರಿ ಆದೇಶದಲ್ಲಿ ಶಿಕ್ಷಣ ಇಲಾಖೆಯಿಂದ ಸಮಾಜ ಕಲ್ಯಾಣ ಇಲಾಖೆಗೆ ವರ್ಗಾವಣೆಯಾಗಿರುವ ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಯು ಸೇರಿದಂತೆ ರಾಮನಗರ, ಮಂಗಳೂರು, ಬಿಜಾಪುರ, ಗುಲ್ಬರ್ಗಾದಲ್ಲಿ 05 ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು 2010-11ನೇ ಸಾಲಿನಿಂದ ಸಮಾಜ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ವರ್ಗಾಯಿಸಿ ಆದೇಶಿಸಲಾಗಿದೆ. ಈ 05 ವಸತಿ ಶಾಲೆಗಳ ನಿರ್ವಹಣೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು, ಇವರನ್ನು ನೋಡಲ್ ಅಧಿಕಾರಿಯಾಗಿ ನೇಮಿಸಲಾಗಿತ್ತು.

ಮೇಲೆ ಓದಲಾದ ಕ್ರ.ಸಂ(2)ರಲ್ಲಿನ ಸರ್ಕಾರಿ ಆದೇಶದಲ್ಲಿ, ಸಮಾಜ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ವರ್ಗಾವಣೆಗೊಂಡಿರುವ 05 ಮುಸ್ಲಿಂ ವಸತಿ ಶಾಲೆಗಳ ನಿರ್ವಹಣೆಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು ಅಲ್ಪಸಂಖ್ಯಾತರ ನಿರ್ದೇಶನಾಲಯದಡಿ ನಿರ್ವಹಣೆ ಮಾಡಲು ಅನುಮತಿ ನೀಡಿ ಆದೇಶಿಸಿದೆ.

ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತರ ಜನಾಂಗದವರಿಗೆ 6 ರಿಂದ 10ನೇ ತರಗತಿಯವರಿಗೆ ಉತ್ತಮ ಶಿಕ್ಷಣ ನೀಡುವ ದೃಷ್ಠಿಯಿಂದ, ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಸರ್ಕಾರಿ ಮುಸ್ಲಿಂ ವಸತಿ ಶಾಲೆಯು ಕನ್ನಡ ಮಾಧ್ಯಮದಲ್ಲಿ 250 ಸಂಖ್ಯಾಬಲ ಮತ್ತು ಉರ್ದು ಮಾಧ್ಯಮದಲ್ಲಿ 250 ಸಂಖ್ಯಾಬಲದ ಒಟ್ಟು 500 ಸಂಖ್ಯಾಬಲದೊಂದಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿದೆ. ಶ್ರೀರಂಗಪಟ್ಟಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಮತ್ತು ಖಾಸಗಿ ವಿದ್ಯಾಸಂಸ್ಥೆಗಳು ಕನ್ನಡ ಮಾಧ್ಯಮದಲ್ಲಿ ನಡೆಯುತ್ತಿದ್ದು, ಸದರಿ ವಸತಿ ಶಾಲೆಯಲ್ಲಿ ಮಂಜೂರಾದ ಸಂಖ್ಯೆಗೆ ಅನುಗುಣವಾಗಿ ಕನ್ನಡ ಮಾಧ್ಯಮಕ್ಕೆ ದಾಖಲಾಗದೇ ಇದ್ದು, ಪೋಷಕರು, ಜನಪ್ರತಿನಿಧಿಗಳು ಆಂಗ್ಲ ಮಾಧ್ಯಮದಲ್ಲಿ ನಡೆಸಲು ಮನವಿ ಮಾಡಿರುವುದರಿಂದ ಕನ್ನಡ ಮಾಧ್ಯಮದಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತಿಸಿ

......2

ಇತರೆ ಸ್ಥಳಕ್ಕೆ ವರ್ಗಾಯಿಸಿ ಆದೇಶ ಹೊರಡಿಸಲು ಮೇಲೆ ಓದಲಾದ ಕ್ರಮಸಂಖ್ಯೆ(3)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ. ಹಾಗೂ ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ:-2225-03-277-2-78 ಶಿಕ್ಷಣ ಇಲಾಖೆಯಿಂದ ವರ್ಗಾವಣೆಗೊಂಡ ಅಲ್ಪಸಂಖ್ಯಾತರ ವಸತಿ ಶಾಲೆಗಳು, ರಾಜ್ಯವಲಯ ಯೋಜನೇತರ 2016-17ನೇ ಸಾಲಿನಲ್ಲಿ ಒದಗಿಸಲಾದ ಅನುದಾನದಲ್ಲಿ ಭರಿಸಲಿದ್ದು, ಹೆಚ್ಚುವರಿ ಅನುದಾನದ ಅವಶ್ಯಕತೆ ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 155 MDS 2016 ಬೆಂಗಳೂರು,ದಿನಾಂಕ:25-05-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಲ್ಪಸಂಖ್ಯಾತರ ಇಲಾಖೆಯಿಂದ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ, ಈ ವಸತಿ ಶಾಲೆಯಲ್ಲಿ ನಡೆಸುತ್ತಿರುವ ಕನ್ನಡ ಮಾಧ್ಯಮವನ್ನು 2016-17ನೇ ಶೈಕ್ಷಣಿಕ ಸಾಲಿನಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತಿಸಿ ನಡೆಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ:-2225-03-277-2-78 ಶಿಕ್ಷಣ ಇಲಾಖೆಯಿಂದ ವರ್ಗಾವಣೆಗೊಂಡ ಅಲ್ಪಸಂಖ್ಯಾತರ ವಸತಿ ಶಾಲೆಗಳು, ರಾಜ್ಯವಲಯ ಯೋಜನೇತರ 2016-17ನೇ ಸಾಲಿನಲ್ಲಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು, ಹಾಗೂ ಹೆಚ್ಚುವರಿ ಅನುದಾನ ಕೋರತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಂ. ನಾಗರತ್ನ 25/5/16

(ಎಂ.ನಾಗರತ್ನ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.

25/5/16

ಗೆ:

1. ಮಹಾಲೇಖಪಾಲರು (ಅ ಮತ್ತು ಇ)(ಲೆಕ್ಕ ಪರಿಶೋಧನೆ-1 &2)ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ , ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ.ಗೋಪುರ, ಬೆಂಗಳೂರು
6. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಶೇಷಾದ್ರಿಪುರಂ, ಬೆಂಗಳೂರು
7. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಬೆಂಗಳೂರು.
8. ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ,
9. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ ಜಿಲ್ಲೆ,
10. ಜಿಲ್ಲಾ ಖಜಾನಾಧಿಕಾರಿಗಳು, ಮಂಡ್ಯ ಜಿಲ್ಲೆ,
11. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮಂಡ್ಯ ಜಿಲ್ಲೆ,
12. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು